**All India Radio: Bangalore**
**National Bulletin In Kannada**
**28.04.2026 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.04.2026 13.10 hrs**

**<>><><*><><<>**

ಮುಖ್ಯಾಂಶಗಳು

**೧. ಸಿಕ್ಕಿಂನಲ್ಲಿ ನಾಲ್ಕು ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ**

**೨. ಚೀನಾ, ರಷ್ಯಾ ರಕ್ಷಣಾ ಸಚಿವರೊಂದಿಗೆ ಸಚಿವ ರಾಜನಾಥ್ ಸಿಂಗ್ ದ್ವಿಪಕ್ಷೀಯ ಮಾತುಕತೆ**

**೩. ಉಡುಪಿಯಲ್ಲಿ ಭಾರತೀಯ ರತ್ನಗಳು ಮತ್ತು ಆಭರಣಗಳ ಸಂಸ್ಥೆಯ ನೂತನ ಕಚೇರಿ ಉದ್ಘಾಟಿಸಿದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್**

**೪. ಐಪಿಎಲ್ ಟಿ-೨೦ ಕ್ರಿಕೆಟ್; ಇಂದಿನ ಪಂದ್ಯದಲ್ಲಿ ಪಂಜಾಬ್ ಸೂಪರ್ ಕಿಂಗ್ಸ್-ರಾಜಸ್ಥಾನ ರಾಯಲ್ಸ್ ತಂಡಗಳ ಹಣಾಹಣಿ**

**<>><><*><><<>**

ಸಿಕ್ಕಿಂನಲ್ಲಿ ಪ್ರತಿಭೆಗಳಿಗೆ ಕೊರತೆಯಿಲ್ಲ. ಸಿಕ್ಕಿಂ ಪೂರ್ವ ಭಾರತದ ಸ್ವರ್ಗವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಗ್ಯಾಂಗ್‌ಟಕ್‌ನ ಪಾಲ್ಜೋರ್ ಕ್ರೀಡಾಂಗಣದಲ್ಲಿ ಇಂದು ನಡೆದ ಸಿಕ್ಕಿಂ ರಾಜ್ಯದ ೫೦ನೇ ರಾಜ್ಯೋತ್ಸವದ ಸಮಾರೋಪ ಸಮಾರಂಭ ಉದ್ದೇಶಿಸಿ ಅವರು ಮಾತನಾಡಿದರು. ಇದೇ ವೇಳೆ ಪ್ರಧಾನಿಯವರು ೪ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಅಲ್ಲದೇ ಈಶಾನ್ಯ ಪ್ರದೇಶಕ್ಕಾಗಿ ಆರು ಕ್ರಿಕೆಟ್ ಅಕಾಡಮಿಗಳನ್ನು ಘೋಷಿಸಿದರು. ಈ ವೇಳೆ ಸಿಕ್ಕಿಂ ರಾಜ್ಯಪಾಲ ಓಂಪ್ರಕಾಶ್ ಮಾಥುರ್, ಮುಖ್ಯಮಂತ್ರಿ ಪ್ರೇಮ್‌ಸಿಂಗ್ ತಮಾಂಗ್ ಸೇರಿದಂತೆ ಸಚಿವರು, ಸಂಸದರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಒಂದು ಸಾವಿರದ ೫೦೦ಕ್ಕೂ ಹೆಚ್ಚು ಕಲಾವಿದರಿಂದ ಏಕತೆಯ ಸಾವಿರ ಹೆಜ್ಜೆಗಳು ಎಂಬ ಶೀರ್ಷಿಕೆಯಡಿ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು.

**<>><><*><><<>**

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ವಾರಾಣಸಿಗೆ ಭೇಟಿ ನೀಡಲಿದ್ದು, ಈ ಸಂದರ್ಭದಲ್ಲಿ ಸುಮಾರು ೬ ಸಾವಿರದ ೩೦೦ ಕೋಟಿ ಮೌಲ್ಯದ ೧೬೩ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಗಂಗಾ ನದಿಗೆ ಅಡ್ಡಲಾಗಿ ನಿರ್ಮಾಣವಾಗಲಿರುವ ಅತ್ಯಾಧುನಿಕ 'ಸಿಗ್ನೇಚರ್ ಸೇತುವೆ' ಈ ಭೇಟಿಯ ಪ್ರಮುಖ ಆಕರ್ಷಣೆಯಾಗಿದ್ದು, ಇದು ನಗರದ ಸಂಚಾರ ದಟ್ಟಣೆಯನ್ನು ಗಣನೀಯವಾಗಿ ಕಡಿಮೆ ಮಾಡಲಿದೆ. ಜೊತೆಗೆ, ವಾರಾಣಸಿ-ಪುಣೆ ಮತ್ತು ಅಯೋಧ್ಯೆ-ಮುಂಬೈ ಮಾರ್ಗದ ಎರಡು ಹೊಸ 'ಅಮೃತ್ ಭಾರತ್ ಎಕ್ಸ್‌ಪ್ರೆಸ್' ರೈಲುಗಳಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಪ್ರವಾಸದ ಭಾಗವಾಗಿ ಬಿಎಲ್‌ಡಬ್ಲ್ಯೂ ಮೈದಾನದಲ್ಲಿ ಆಯೋಜಿಸಿರುವ 'ನಾರಿ ಶಕ್ತಿ ವಂದನ್' ಸಮಾವೇಶದಲ್ಲಿ ಸುಮಾರು ೫೦ ಸಾವಿರಕ್ಕೂ ಹೆಚ್ಚು ಮಹಿಳೆಯರನ್ನು ಉದ್ದೇಶಿಸಿ ಪ್ರಧಾನಿ ಮಾತನಾಡಲಿದ್ದಾರೆ. ಕಾಶಿ ವಿಶ್ವನಾಥ ದೇಗುಲಕ್ಕೆ ನಾಳೆ ಭೇಟಿ ನೀಡಲಿರುವ ಪ್ರಧಾನಿ, ಸುಮಾರು ೧೨ ಕಿಲೋಮೀಟರ್ ಉದ್ದದ ರೋಡ್ ಶೋ ನಡೆಸುವ ಸಾಧ್ಯತೆಯಿದೆ. ಈ ಮೂಲಕ ಕಾಶಿಯ ಸಮಗ್ರ ಅಭಿವೃದ್ಧಿ ಮತ್ತು ಜನಸಂಪರ್ಕಕ್ಕೆ ಮತ್ತಷ್ಟು ಬಲ ತುಂಬಲಿದ್ದಾರೆ.

**<>><><*><><<>**

ಕಿರ್ಗಿಸ್ತಾನದ ಬಿಷ್ಕೆಕ್‌ನಲ್ಲಿ ನಡೆಯುತ್ತಿರುವ ಶಾಂಘೈ ಸಹಕಾರ ಸಂಸ್ಥೆಯ ರಕ್ಷಣಾ ಸಚಿವರ ಸಭೆಯ ನೇಪಥ್ಯದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಚೀನಾ ರಕ್ಷಣಾ ಸಚಿವ ಅಡ್ಮಿರಲ್ ಡಾಂಗ್ ಜುನ್ ಮತ್ತು ರಷ್ಯಾ ರಕ್ಷಣಾ ಸಚಿವ ಆಂಡ್ರೆ ಬೆಲೌಸೊವ್ ಅವರೊಂದಿಗೆ ಸಭೆ ನಡೆಸಿದರು. ಇಂದು ಶಾಂಘೈ ಸಹಕಾರ ಸಂಸ್ಥೆಯ ರಕ್ಷಣಾ ಸಚಿವರ ಸಭೆಯಲ್ಲಿ ಸಚಿವ ರಾಜನಾಥ್ ಸಿಂಗ್ ಭಾಗವಹಿಸಲಿದ್ದಾರೆ. ವಿಶ್ವಾದ್ಯಂತ ಭದ್ರತಾ ಸವಾಲುಗಳು ಎದುರಾಗಿರುವ ಈ ಸಂದರ್ಭದಲ್ಲಿ ಜಾಗತಿಕ ಶಾಂತಿಯ ಬಗ್ಗೆ ಭಾರತಕ್ಕಿರುವ ಬದ್ಧತೆಯನ್ನು ಸಭೆಯಲ್ಲಿ ಒತ್ತಿ ಹೇಳಲಾಗುವುದು. ಭಯೋತ್ಪಾದನೆ ಮತ್ತು ಉಗ್ರವಾದದ ವಿರುದ್ಧ ಭಾರತ ಹೊಂದಿರುವ ಶೂನ್ಯ ಸಹಿಷ್ಣುತೆ ನಿಲುವನ್ನು ಸಭೆಯಲ್ಲಿ ಸ್ಪಷ್ಟಪಡಿಸಲಾಗುವುದು ಎಂದು ರಾಜನಾಥ್ ಸಿಂಗ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

**<>><><*><><<>**

ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ನವದೆಹಲಿಯಲ್ಲಿ ಅರ್ಮೇನಿಯಾ ಸೇನಾ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಎಡ್ವರ್ಡ್ ಅಸ್ರ್ಯನ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಸಭೆಯಲ್ಲಿ ಉಭಯ ದೇಶಗಳ ನಡುವೆ ತರಬೇತಿ, ಸಾಮರ್ಥ್ಯ ವೃದ್ಧಿ, ಆಧುನೀಕರಣ ಸೇರಿದಂತೆ ಮಿಲಿಟರಿ ಸಹಕಾರವನ್ನು ವಿಸ್ತರಿಸುವ ಕುರಿತು ಚರ್ಚಿಸಲಾಯಿತು. ಭಾರತ, ವಿಶ್ವಾಸಾರ್ಹ

ಪಾಲುದಾರನಾಗಲು ಮತ್ತು ಆತ್ಯಾಧುನಿಕ ರಕ್ಷಣಾ ಸಾಧನಗಳೊಂದಿಗೆ ಅರ್ಮೇನಿಯಾ ಬೆಂಬಲಿಸುವ ತನ್ನ ಬದ್ಧತೆಯನ್ನು ಪುನರುಚ್ಚರಿಸಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<>><><*><><<>

ಉಡುಪಿಯ ಬನ್ನಂಜೆಯ ಜಿಲ್ಲಾ ಪಂಚಾಯಿತಿ ಕಟ್ಟಡದಲ್ಲಿ ಭಾರತೀಯ ರತ್ನಗಳು ಮತ್ತು ಆಭರಣಗಳ ಸಂಸ್ಥೆ - ಐಐಜಿಜೆ ನೂತನ ಕಚೇರಿಯನ್ನು ಇಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಉದ್ಘಾಟಿಸಿದರು. ಈ ನೂತನ ಕೇಂದ್ರದಲ್ಲಿ ಆಭರಣ ಹಾಗೂ ನವರತ್ನ ವಿನ್ಯಾಸ, ಇತ್ಯಾದಿಗಳ ಆಧುನಿಕ ತಂತ್ರಜ್ಞಾನ ಆಧಾರಿತ ತರಬೇತಿ ನೀಡಲಾಗುತ್ತದೆ. ಕೇಂದ್ರ ಸರ್ಕಾರ ಪ್ರಾಯೋಜಕತ್ವದ ದಕ್ಷಿಣ ಭಾರತದ ಏಕೈಕ ಸಂಸ್ಥೆ ಇದಾಗಿದೆ. ಈ ಸಂದರ್ಭದಲ್ಲಿ ಸಂಸದ ಕೋಟಾ ಶ್ರೀನಿವಾಸ ಪೂಜಾರಿ, ಶಾಸಕ ಯಶ್‌ಪಾಲ್ ಸುವರ್ಣ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಇಂದು ಮಧ್ಯಾಹ್ನ ಸಚಿವೆ ನಿರ್ಮಲಾ ಸೀತಾರಾಮನ್ ಅವರು, ಮಂಗಳೂರು ದೇರಳಕಟ್ಟೆಯ ಕೆ.ಎಸ್.ಹೆಗ್ಡೆ ಕ್ಷೇಮ ಸಭಾಂಗಣದಲ್ಲಿ 'ವಿಕಸಿತ ಭಾರತ-೨೦೪೭; ಒಂದು ದೃಷ್ಟಿಕೋನ' ವಿಷಯವಾಗಿ, ನಿಟ್ಟೆ ವಿನಯ್ ಹೆಗ್ಡೆ ಸ್ಮಾರಕ ಉಪನ್ಯಾಸ ನೀಡಿ, ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹಾಗೂ ಮಾಜಿ ಲೋಕಾಯುಕ್ತ ನ್ಯಾಯಮೂರ್ತಿ ಎನ್.ಸಂತೋಷ್ ಹೆಗ್ಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

<>><><*><><<>

ಪಶ್ಚಿಮ ಬಂಗಾಳ ವಿಧಾನಸಭೆಯ ಎರಡನೇ ಹಾಗೂ ಅಂತಿಮ ಹಂತದ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ನಿನ್ನೆ ತೆರೆ ಬಿದ್ದಿದೆ. ಇಂದು ಅಭ್ಯರ್ಥಿಗಳು ಮತ್ತು ನಾಯಕರು ಮನೆ ಮನೆಗೆ ತೆರಳಿ ಪ್ರಚಾರದಲ್ಲಿ ತೊಡಗಿದ್ದಾರೆ. ನಾಳೆ ಏಳು ಜಿಲ್ಲೆಗಳ ಒಟ್ಟು ೧೪೨ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಈ ಹಂತದಲ್ಲಿ ೨೨೦ ಮಹಿಳೆಯರು ಸೇರಿದಂತೆ ಒಂದು ಸಾವಿರದ ೪೪೮ ಅಭ್ಯರ್ಥಿಗಳು ಕಣದಲ್ಲಿದ್ದಾರೆ.

<>><><*><><<>

ಗುಜರಾತ್‌ನಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯ ಮತ ಎಣಿಕೆ ನಡೆಯುತ್ತಿದೆ. ೧೫ ಪುರಸಭೆಗಳ ೮೪ ನಗರಪಾಲಿಕೆಗಳು, ೩೪ ಜಿಲ್ಲಾ ಪಂಚಾಯತ್‌ಗಳು ಮತ್ತು ೨೬೦ ತಾಲೂಕು ಪಂಚಾಯತ್‌ಗಳಿಗೆ ಮತದಾನ ನಡೆದಿದ್ದು, ೧೧ ಪುರಸಭೆಗಳ ಒಂಬತ್ತು ಸ್ಥಾನಗಳಿಗೆ ಭಾನುವಾರ ಉಪಚುನಾವಣೆ ನಡೆದಿತ್ತು.

<>><><*><><<>

ಶುದ್ಧ ಇಂಧನ, ಸುಧಾರಿತ ತಂತ್ರಜ್ಞಾನ ಮತ್ತು ಆರ್ಥಿಕ ಸ್ಥಿತಿಸ್ಥಾಪಕತ್ವಕ್ಕೆ ಅಗತ್ಯವಾದ ನಿರ್ಣಾಯಕ ಖನಿಜಗಳನ್ನು ಹೊಂದಲು ಭಾರತ ಪ್ರಯತ್ನಗಳನ್ನು ಹೆಚ್ಚಿಸುತ್ತಿದೆ ಎಂದು ಕೇಂದ್ರ ಗಣಿ ಸಚಿವಾಲಯದ ಕಾರ್ಯದರ್ಶಿ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿಂದು 'ಸುಸ್ಥಿರ ಭವಿಷ್ಯಕ್ಕಾಗಿ ನಿರ್ಣಾಯಕ ಖನಿಜಗಳ ಮೌಲ್ಯ ಸರಪಳಿಯನ್ನು ಅಭಿವೃದ್ಧಿಪಡಿಸುವುದು' ಎಂಬ ಶೀರ್ಷಿಕೆಯಡಿ ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರೀಯ ನಿರ್ಣಾಯಕ ಖನಿಜಗಳ ಮಿಷನ್, ಪರಿಶೋಧನೆ, ಹರಾಜು, ಸಂಸ್ಕರಣೆ ಮತ್ತು ಮರುಬಳಕೆಯನ್ನು ಒಳಗೊಂಡ ಸುಧಾರಣೆಗಳ ಮೂಲಕ ದೀರ್ಘಕಾಲೀನ ಪೂರೈಕೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ ಎಂದರು. ಭವಿಷ್ಯಕ್ಕಾಗಿ ಸ್ಥಿತಿಸ್ಥಾಪಕ ಮತ್ತು ಸುಸ್ಥಿರ ಪೂರೈಕೆ ಸರಪಳಿಗಳನ್ನು ರಚಿಸಲು ಭಾರತ ಪರಿವರ್ತನಾಶೀಲ ಪ್ರಯಾಣದಲ್ಲಿದೆ ಎಂದು ಪಿಯೂಶ್ ಗೋಯಲ್ ಹೇಳಿದರು.

<>><><*><><<>

ಪಾತಕಿ ದಾವೂದ್ ಇಬ್ರಾಹಿಂ ಆಪ್ತ ಮತ್ತು ಕುಖ್ಯಾತ ಮಾದಕವಸ್ತು ಕಳ್ಳಸಾಗಣೆದಾರ ಮೊಹಮ್ಮದ್ ಸಲೀಂ ಡೋಲಾನನ್ನು ಇಂದು ಬೆಳಗ್ಗೆ ಭಾರತಕ್ಕೆ ಕರೆತರಲಾಗಿದೆ. ಗುಪ್ತಚರ ಸಂಸ್ಥೆಗಳು ಅಂತಾರಾಷ್ಟ್ರೀಯ ಸಂಸ್ಥೆಗಳ ಸಹಯೋಗದೊಂದಿಗೆ ನಡೆಸಿದ ಸಂಘಟಿತ ಕಾರ್ಯಾಚರಣೆಯ ನಂತರ ಆತನನ್ನು ಟರ್ಕಿಯಿಂದ ಗಡೀಪಾರು ಮಾಡಲಾಗಿದೆ. ಮಾದಕದ್ರವ್ಯ ನಿಯಂತ್ರಣ ದಳ, ಟರ್ಕಿಯಿಂದ ಸಲೀಂ ಡೋಲಾನನ್ನು ಕರೆತರುವಲ್ಲಿ ಪ್ರಮುಖ ಪ್ರಗತಿ ಸಾಧಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

<>><><*><><<>

ನ್ಯೂ ಚಂಡೀಗಢದ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಸೂಪರ್ ಕಿಂಗ್ಸ್ ಮತ್ತು ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ೯ ವಿಕೆಟ್‌ಗಳಿಂದ ಅಮೋಘ ಜಯ ದಾಖಲಿಸಿದೆ.

<>><><*><><<>

ಲಂಡನ್‌ನಲ್ಲಿ ಇಂದಿನಿಂದ ಆರಂಭವಾಗಲಿರುವ ಐಟಿಟಿಎಫ್ ವಿಶ್ವ ತಂಡ ಟೇಬಲ್ ಟೆನಿಸ್ ಚಾಂಪಿಯನ್‌ಶಿಪ್-೨೦೨೬ರಲ್ಲಿ ಭಾರತದ ಮನಿಕಾ ಬಾತ್ರಾ ಮತ್ತು ಸತಿಯನ್ ಜ್ಞಾನಶೇಖರನ್ ನೇತೃತ್ವದ ೧೦ ಸದಸ್ಯರ ಭಾರತೀಯ ತಂಡ ಕಣಕ್ಕಿಳಿಯಲಿದೆ. ಪುರುಷರ ಮತ್ತು ಮಹಿಳೆಯರ

ವಿಭಾಗದಲ್ಲಿ ಪ್ರತ್ಯೇಕವಾಗಿ ನಡೆಯಲಿರುವ ಈ ಪಂದ್ಯಾವಳಿಯಲ್ಲಿ ಪ್ರತಿ ಗುಂಪು ಸ್ಪರ್ಧೆ ಗರಿಷ್ಠ ಐದು ಸಿಂಗಲ್ಸ್ ಪಂದ್ಯಗಳನ್ನು ಒಳಗೊಂಡಿರಲಿದ್ದು, ಮೂರು ಪಂದ್ಯಗಳಲ್ಲಿ ಜಯ ಸಾಧಿಸುವ ತಂಡವು ಮುಂದಿನ ಹಂತಕ್ಕೆ ಅರ್ಹತೆ ಪಡೆಯಲಿದೆ. ಒಟ್ಟು ೬೪ ತಂಡಗಳು ಈ ಪ್ರತಿಷ್ಠಿತ ಕೂಟದಲ್ಲಿ ಭಾಗವಹಿಸುತ್ತಿದ್ದು, ಪ್ರಾಥಮಿಕ ಹಂತದ ನಂತರ ನಾಕೌಟ್ ಪಂದ್ಯಗಳು ನಡೆಯಲಿವೆ.

**<><><*><><>**

ಬೇಸಿಗೆಯ ತಿಂಗಳಲ್ಲಿ ನಿರೀಕ್ಷಿತ ಬಿಸಿಲಿನ ತಾಪ ಹೆಚ್ಚಳದ ಪರಿಸ್ಥಿತಿಗಳನ್ನು ಗಮನದಲ್ಲಿಟ್ಟುಕೊಂಡು ಸಿದ್ಧತೆಯನ್ನು ಬಲಪಡಿಸುವಂತೆ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಒತ್ತಾಯಿಸಿದೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳಿಗೆ ಬರೆದ ಪತ್ರದಲ್ಲಿ, ಕೇಂದ್ರ  ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಕಾರ್ಯದರ್ಶಿ ಪುಣ್ಯ ಸಲಿಲಾ ಶ್ರೀವಾಸ್ತವ ಅವರು, ಈ ವರ್ಷ ಏಪ್ರಿಲ್ ನಿಂದ ಜೂನ್ ವರೆಗೆ ಪೂರ್ವ, ಮಧ್ಯ ಮತ್ತು ವಾಯುವ್ಯ ಭಾರತದ ಕೆಲವು ಭಾಗಗಳಲ್ಲಿ ಹಾಗೂ ಆಗ್ನೇಯ ಪರ್ಯಾಯ ದ್ವೀಪದಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಬಿಸಿಲಿನ ತಾಪ ಇರುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಗಳ ಆಧಾರದ ಮೇಲೆ ತಿಳಿಸಿದ್ದಾರೆ.

**<><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ ><><<>**